# ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಮುಖ್ಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ರಾಮನಗರ

ಸಿ.ಸಿ. ನಂ.04/2021

ಚಾಸಾ-3/ಪ್ರಾಸಾ-2

| | | |
|---|---|---|
| ಹೆಸರು | ಃ- | ಅಂಜನಪ್ಪ |
| ತಂದೆ ಹೆಸರು | ಃ- | ಕೃಷ್ಣಪ್ಪ |
| ವಯಸ್ಸು | ಃ- | 47 ವರ್ಷ |
| ವೃತ್ತಿ | ಃ- | ಕೂಲಿ |
| ವಾಸ ಸ್ಥಳ | ಃ- | ಮಂಚನಾಯಕನಹಳ್ಳಿ |
| ದಿನಾಂಕ | ಃ- | 15.09.2022 |

ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಈಗ ನಾನು ನೋಡುತ್ತಿರುವ ದಾಖಲೆಯಲ್ಲಿರುವ ಹೆಬ್ಬೆಟ್ಟಿನ ಗುರುತು ನನ್ನದಿರುತ್ತದೆ. ಸದರಿ ದಾಖಲೆಯು ಸ್ಥಳ ಪಂಚನಾಮೆಯಾಗಿದ್ದು, ಅದನ್ನು ಈಗಾಗಲೇ ಪಿ.ಡಬ್ಲ್ಯೂ-1 ರವರ ಮೂಲಕ ನಿಪಿ-1 ಎಂದು ಗುರುತಿಸಲಾಗಿದೆ. ಸದರಿ ದಾಖಲೆಯಲ್ಲಿನ ನನ್ನ ಹೆಬ್ಬೆಟ್ಟಿನ ಗುರುತನ್ನು ಸುಮಾರು 2 ವರ್ಷಗಳ ಹಿಂದೆ ಬಿಡದಿ ಪೊಲೀಸ್ ಠಾಣೆಯಲ್ಲಿ ಮಾಡಿದ್ದು, ಯಾವ ವಿಚಾರಕ್ಕಾಗಿ ಸದರಿ ಸಹಿಯನ್ನು ಮಾಡಿದ್ದೇನೆ ಎನ್ನುವುದು ನನಗೆ ಗೊತ್ತಿಲ್ಲ. ಯಾವುದೋ ಒಂದು ದೂರಿನ ಸಂಬಂಧ ಸಹಿ ಮಾಡುವಂತೆ ಹೇಳಿದ ಕಾರಣ ಸದರಿ ಹೆಬ್ಬೆಟ್ಟಿನ ಗುರುತನ್ನು ಹಾಕಿರುತ್ತೇನೆ. ನಿಪಿ-1 ರಲ್ಲಿ ಬರೆದ ವಿಚಾರ ನನಗೆ ಗೊತ್ತಿಲ್ಲ.

(ಮಾನ್ಯ ಎ.ಪಿ.ಪಿ. ರವರ ಕೋರಿಕೆಯ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿಯನ್ನು ನೀಡಲಾಯಿತು.)

## ಪಾಟೀ ಸವಾಲು ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ದಿನಾಂಕ 10.12.2019 ರಂದು ಮಂಚನಾಯಕನಹಳ್ಳಿ ವಂಡರ್ ಲಾ ಪಾರ್ಕ್ ಕಡೆಗೆ ಹೋಗುವ ರೈಲ್ವೆ ಮೇಲುಸೇತುವೆಯ ಮೇಲೆ ಬಿಡದಿ ಪೊಲೀಸ್ ಠಾಣೆಯ ಮೊಕದ್ದಮೆ ಸಂಖ್ಯೆ 376/2019 ಪ್ರಕರಣಕ್ಕೆ ಸಂಬಂಧಿಸಿದಂತೆ ಚಾಸಾ-1 ರವರ ಚಿನ್ನದ ಮಾಂಗಲ್ಯದ ಸರ, ಒಂದು ಲಕ್ಷ್ಮಿ ಕಾಸು, 2 ಗುಂಡುಗಳು ಹಾಗೂ ಅವರ ಮೊಬೈಲ್ ಫೋನ್ ಸುಲಿಗೆಯಾಗಿದ್ದ ವಿಚಾರಕ್ಕೆ ಸಂಬಂಧಿಸಿದಂತೆ ಪೊಲೀಸರು ಸಂಜೆ 5.15 ರಿಂದ 6.00 ಗಂಟೆಯ ನಡುವೆ ಸ್ಥಳದಲ್ಲಿ ಚಾಸಾ-1, ನನ್ನ ಹಾಗೂ ಚಾಸಾ-2 ರವರ ಸಮಕ್ಷಮ ನಿಪಿ-1 ರಂತೆ ಮಹಜರ್ ಕ್ರಮ ಜರುಗಿಸಿದ್ದು, ಅದಕ್ಕೆ ಈಗ ನಾನು ಗುರುತಿಸಿದ ನನ್ನ ಹೆಬ್ಬೆಟ್ಟಿನ ಗುರುತನ್ನು ಪಡೆದುಕೊಂಡರು ಎನ್ನುವುದು ಸರಿಯಲ್ಲ. ನಿಪಿ-1 ರ ಸಂಪೂರ್ಣ ವಿಚಾರಗಳು ನನಗೆ ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎನ್ನುವುದು ಸರಿಯಲ್ಲ.

## ಪಾಟೀ ಸವಾಲು ಆರೋಪಿ ಪರ ವಕೀಲರಿಂದಃ

ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.

ಮರು ವಿಚಾರಣೆ ಃ ಇಲ್ಲ

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)
(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ಸರಸ್ವತಿ ಕೆ.ಎನ್.)
ರಾಮನಗರದ ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು.